**Akashvani: Bangalore**
**Regional Bulletin In Kannada**
**19.03.2026: 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**19.03.2026: 14.30hrs**

*********

**ಮುಖ್ಯಾಂಶಗಳು :**

1. ನಾಡಿನಾದ್ಯಂತ ಸಡಗರ-ಸಂಭ್ರಮದಿಂದ ಯುಗಾದಿ ಆಚರಣೆ; ಪ್ರಧಾನಿ, ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಶುಭಾಶಯ
2. ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಉಪ ಚುನಾವಣೆಃ ಬಿಜೆಪಿ ಅಭ್ಯರ್ಥಿಗಳ ಪಟ್ಟಿ ಪ್ರಕಟ
3. ನವೀಕರಿಸಬಹುದಾದ ಇಂಧನ ಉತ್ಪಾದನೆಯಲ್ಲಿ ಭಾರತ ಮೂರನೇ ಅತಿ ದೊಡ್ಡ ರಾಷ್ಟ್ರ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ
4. ಯುಗಾದಿ-ರಂಜಾನ್ ಹಬ್ಬದ ಪ್ರಯುಕ್ತ ನೈಋತ್ಯ ರೈಲ್ವೆಯಿಂದ ವಿಶೇಷ ರೈಲಿನ ವ್ಯವಸ್ಥೆ

********

ಚೈತ್ರ ಮಾಸದ ಪರಾಭವ ನಾಮ ಸಂವತ್ಸರದ ಯುಗಾದಿ ಹಬ್ಬವನ್ನು ನಾಡಿನಾದ್ಯಂತ ಸಡಗರ-ಸಂಭ್ರಮದಿಂದ ಆಚರಿಸಲಾಗುತ್ತಿದೆ. ಮನೆಯ ಬಾಗಿಲುಗಳನ್ನು ತಳಿರು ತೋರಣಗಳಿಂದ ಅಲಂಕರಿಸಿ ಹಬ್ಬವನ್ನು ಸಂಭ್ರಮದಿಂದ ಆಚರಿಸುತ್ತಿದ್ದಾರೆ. ಕಷ್ಟ ಸುಖಗಳನ್ನು ಸಮಾನವಾಗಿ ಸ್ವೀಕರಿಸುವ ದ್ಯೋತಕವಾಗಿ ಬೇವು, ಬೆಲ್ಲವನ್ನು ಹಂಚುವುದರೊಂದಿಗೆ ಪರಸ್ಪರ ಶುಭಾಶಯ ವಿನಿಮಯ ಮಾಡಿಕೊಳ್ಳಲಾಗುತ್ತಿದೆ. ಯುಗಾದಿ ಹಬ್ಬದ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಅನೇಕ ಗಣ್ಯರು ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ. ಯುಗಾದಿಯು ಹೊಸ ವರ್ಷದ ಮುನ್ನುಡಿಯಾಗಿದ್ದು, ಮುಂಬರುವ ವರ್ಷವೂ ಸರ್ವರಿಗೂ ಸುಖ, ಯಶಸ್ಸು ಮತ್ತು ಉತ್ತಮ ಆರೋಗ್ಯವನ್ನು ತರಲೆಂದು ಪ್ರಾರ್ಥಿಸುತ್ತೇನೆ. ಈ ಹೊಸ ವರ್ಷವು ಪ್ರತಿಯೊಬ್ಬರು ತಮ್ಮ ಗುರಿಗಳನ್ನು ಪ್ರಾಮಾಣಿಕತೆಯಿಂದ ತಲುಪಲು ಮತ್ತು ಸಮಾಜದ ಏಳಿಗೆಗೆ ಸಕಾರಾತ್ಮಕವಾಗಿ ಕೊಡುಗೆ ನೀಡಲು ಪ್ರೇರಣೆಯಾಗಲಿ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮ ಸಂದೇಶದಲ್ಲಿ ಹಾರೈಸಿದ್ದಾರೆ. ಯುಗ ಪರಿವರ್ತನೆಯ ಸಂದೇಶದ ಯುಗಾದಿ ಹಬ್ಬ ಪ್ರತಿಯೊಬ್ಬರ ಬಾಳಲ್ಲಿ ಧನಾತ್ಮಕ ಬದಲಾವಣೆಯನ್ನು ಹೊತ್ತು ತರಲಿ. ಎಲ್ಲರಲ್ಲೂ ಹೊಸ ಉತ್ಸಾಹ, ಹೊಸ ಚಿಂತನೆ, ಹೊಸ ಭರವಸೆಗಳನ್ನು ತುಂಬಲಿ ಎಂದು ನಾಡಿನ ಜನತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಶುಭ ಕೋರಿದ್ದಾರೆ. ರಾಜ್ಯದ ಹಲವೆಡೆಯೂ ಯುಗಾದಿ ಹಬ್ಬವನ್ನು ಸಡಗರ - ಸಂಭ್ರಮದಿಂದ

ಆಚರಿಸಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರದಲ್ಲಿ ಕಾಮನಮೂರ್ತಿಗಳನ್ನು ರಚಿಸಿ, ಪೂಜೆ ಸಲ್ಲಿಸಲಾಯಿತು. ಜಿಲ್ಲೆಯ ಪ್ರಸಿದ್ಧ ದೇವಾಲಯಗಳಾದ ಘಾಟಿ ಸುಬ್ರಹ್ಮಣ್ಯ, ಶಿವಗಂಗೆ, ಕನಸವಾಡಿ ಶನಿಮಹಾತ್ಮ ಮೊದಲಾದ ದೇವಾಲಯಗಳಲ್ಲಿ ಯುಗಾದಿ ದಿನವಾದ ಇಂದು ವಿಶೇಷ ಅಲಂಕಾರ ಹಾಗೂ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಕೋಲಾರ ಜಿಲ್ಲೆಯಲ್ಲಿ ಯುಗಾದಿ ಸಡಗರ ಮನೆ ಮಾಡಿದೆ. ಅಮಾವಾಸ್ಯೆ ಪ್ರಯುಕ್ತ ದೇವಾಲಯಗಳಲ್ಲಿ ರುದ್ರಾಭಿಷೇಕ, ಹಾಲಿನ ಅಭಿಷೇಕ ಸೇರಿದಂತೆ ವಿಶೇಷ ಪೂಜಾ ಕೈಂಕರ್ಯಗಳು ಜರುಗುತ್ತಿವೆ.

********

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಉಪ ಚುನಾವಣೆಗೆ ಬಿಜೆಪಿ ಇಂದು ತನ್ನ ಅಭ್ಯರ್ಥಿಗಳನ್ನು ಘೋಷಿಸಿದೆ. ಬಾಗಲಕೋಟೆ ವಿಧಾನಸಭಾ ಕ್ಷೇತ್ರದಿಂದ ವೀರಭದ್ರಯ್ಯ ಚರಂತಿಮಠ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಿಂದ ಶ್ರೀನಿವಾಸ್.ಟಿ. ಕರಿಯಪ್ಪ ಅವರನ್ನು ಪಕ್ಷದ ಅಭ್ಯರ್ಥಿಯಾಗಿ ಹೆಸರಿಸಲಾಗಿದೆ. ಬಿಜೆಪಿ ಅಧ್ಯಕ್ಷ ನಿತಿನ್ ನಬೀನ್ ಅವರ ಅಧ್ಯಕ್ಷತೆಯಲ್ಲಿ ನಿನ್ನೆ ನಡೆದ ಪಕ್ಷದ ಕೇಂದ್ರ ಚುನಾವಣಾ ಸಮಿತಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ. ಈ ಎರಡು ಕ್ಷೇತ್ರಗಳಿಗೆ ಏಪ್ರಿಲ್ ೯ ರಂದು ಉಪ ಚುನಾವಣೆ ನಡೆಯಲಿದೆ. ಮಾಜಿ ಸಚಿವ ಎಚ್. ವೈ. ಮೇಟಿ ನಿಧನದಿಂದ ಬಾಗಲಕೋಟೆ ವಿಧಾನಸಭಾ ಕ್ಷೇತ್ರ ಹಾಗೂ ಶಾಮನೂರು ಶಿವಶಂಕರಪ್ಪ ನಿಧನದಿಂದ ದಾವಣಗೆರೆ ದಕ್ಷಣ ವಿಧಾನಸಭಾ ಕ್ಷೇತ್ರ ತೆರವಾಗಿತ್ತು.

********

ಸೌರಶಕ್ತಿ, ನವೀಕರಿಸಬಹುದಾದ ಇಂಧನ ಉತ್ಪಾದನೆಯಲ್ಲಿ ಭಾರತ ಮೂರನೇ ಅತಿ ದೊಡ್ಡ ರಾಷ್ಟ್ರವಾಗಿದೆ ಎಂದು ಕೇಂದ್ರ ನವೀಕರಿಸಬಹುದಾದ ಇಂಧನ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ೨೦೩೦ರ ವೇಳೆಗೆ ೫೦೦ ಗಿಗಾವ್ಯಾಟ್ ನವೀಕರಿಸಬಹುದಾದ ಇಂಧನ ಗುರಿಯತ್ತ ಸಾಗಿರುವ ಭಾರತದ ಇಂಧನ ಉತ್ಪಾದನೆ ಅಭೂತಪೂರ್ವ ವೇಗ ಪಡೆಯುತ್ತಿದೆ ಎಂದಿದ್ದಾರೆ. ಪ್ರಧಾನಮಂತ್ರಿ ಸೂರ್ಯಘರ್ ಮತ್ತು ಪಿಎಂ-ಕುಸುಮ್ ಯೋಜನೆಯಡಿಯಲ್ಲಿ ೨೩ ಲಕ್ಷ ಸೌರಶಕ್ತಿ ನೀರಾವರಿ ಪಂಪ್‌ಗಳಾಗಿ ಪರಿವರ್ತನೆಗೊಂಡಿವೆ. ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವದಲ್ಲಿ ಭಾರತ ಪರಿವರ್ತನಾತ್ಮಕ ಪ್ರಗತಿಯನ್ನು ಸಾಧಿಸುತ್ತಿದೆ ಎಂದು ಶ್ಲಾಘಿಸಿದ್ದಾರೆ. ರಸಗೊಬ್ಬರ ಉದ್ಯಮದಲ್ಲಿ ಬಳಸುವ ಶೇಕಡ ೨೮ರಷ್ಟು ಅಮೋನಿಯಾವನ್ನು ಹಸಿರು ಅಮೋನಿಯಾದೊಂದಿಗೆ ಬದಲಾಯಿಸಲು ತಯಾರಿ ನಡೆದಿದೆ. ಇದು ಆಮದು ಅವಲಂಬನೆಯನ್ನು ಪರಿಹರಿಸಿ, ಆತ್ಮನಿರ್ಭರ ಭಾರತವನ್ನು ಬಲಪಡಿಸುತ್ತದೆ ಎಂದು ಸಚಿವರು ತಿಳಿಸಿದ್ದಾರೆ.

********

ಯುಗಾದಿ ಮತ್ತು ರಂಜಾನ್ ಹಬ್ಬಗಳ ಸಂದರ್ಭದಲ್ಲಿ ಪ್ರಯಾಣಿಕರ ಹೆಚ್ಚುವರಿ ದಟ್ಟಣೆ ಕಡಿಮೆ ಮಾಡಲು, ನೈಋತ್ಯ ರೈಲ್ವೆಯು ಯಶವಂತಪುರ - ಮಡಗಾಂವ್ - ಬೆಂಗಳೂರು ಕಂಟೋನ್ಮೆಂಟ್ ನಡುವೆ ಒಂದು ಟ್ರಿಪ್ ವಿಶೇಷ ಎಕ್ಸ್‌ಪ್ರೆಸ್ ರೈಲಿನ ವ್ಯವಸ್ಥೆ ಮಾಡಿದೆ. ಯಶವಂತಪುರ-ಮಡಗಾಂವ್ ವಿಶೇಷ ಎಕ್ಸ್‌ಪ್ರೆಸ್ ರೈಲು ನಾಳೆ ಬೆಳಿಗ್ಗೆ ೧೧:೫೦ಕ್ಕೆ ಯಶವಂತಪುರದಿಂದ ಹೊರಟು, ಶನಿವಾರ ಬೆಳಿಗ್ಗೆ ೦೬:೪೫ಕ್ಕೆ ಮಡಗಾಂವ್ ತಲುಪಲಿದೆ. ಮಡಗಾಂವ್- ಬೆಂಗಳೂರು ಕಂಟೋನ್ಮೆಂಟ್ ವಿಶೇಷ ಎಕ್ಸ್‌ಪ್ರೆಸ್ ರೈಲು, ಭಾನುವಾರ ಬೆಳಿಗ್ಗೆ ೧೧:೦೦ ಗಂಟೆಗೆ ಮಡಗಾಂವ್‌ನಿಂದ ಹೊರಟು ಸೋಮವಾರ ಬೆಳಿಗ್ಗೆ ೦೫:೨೦ಕ್ಕೆ ಬೆಂಗಳೂರು ಕಂಟೋನ್ಮೆಂಟ್ ತಲುಪಲಿದೆ. ಈ ವಿಶೇಷ ರೈಲುಗಳು ಕುಣಿಗಲ್, ಚನ್ನರಾಯಪಟ್ಟಣ, ಹಾಸನ, ಸಕಲೇಶಪುರ, ಸುಬ್ರಹ್ಮಣ್ಯ ರೋಡ್, ಕಬಕಪುತ್ತೂರು, ಬಂಟ್ವಾಳ, ಸುರತ್ಕಲ್, ಮುಲ್ಕಿ, ಉಡುಪಿ, ಬಾರ್ಕೂರು, ಕುಂದಾಪುರ, ಬೈಂದೂರು, ಭಟ್ಕಳ, ಮುರುಡೇಶ್ವರ, ಹೊನ್ನಾವರ, ಕುಮಟಾ, ಗೋಕರ್ಣ ರೋಡ್, ಅಂಕೋಲಾ ಮತ್ತು ಕಾರವಾರ ನಿಲ್ದಾಣಗಳಲ್ಲಿ ಎರಡೂ ದಿಕ್ಕುಗಳಲ್ಲಿ ನಿಲುಗಡೆ ಮಾಡಲಿವೆ ಎಂದು ರೈಲ್ವೆ ಪ್ರಕಟಣೆ ತಿಳಿಸಿದೆ.

********

ದಾವಣಗೆರೆ, ಯಾದಗಿರಿ ಸೇರಿದಂತೆ ರಾಜ್ಯದ ಹಲವಡೆ ನಿನ್ನೆ ಸಂಜೆ ಸುರಿದ ಧಾರಾಕಾರ ಮಳೆಯಿಂದಾಗಿ ಅಪಾರ ಪ್ರಮಾಣದ ಸಾರ್ವಜನಿಕ ಆಸ್ತಿ ಪಾಸ್ತಿಗೆ ಹಾನಿಯಾಗಿದೆ. ದಾವಣಗೆರೆ ಜಿಲ್ಲೆಯ ಮಾಯಕೊಂಡ ಹೋಬಳಿ ವ್ಯಾಪ್ತಿಯ ದೊಡ್ಡ ಮಾಗಡಿ, ದಿಂಡದಹಳ್ಳಿ, ಪರಶುರಾಂಪುರ ಸೇರಿದಂತೆ ಹತ್ತಾರು ಗ್ರಾಮಗಳಲ್ಲಿ ೫೦ ಕ್ಕೂ ಅಧಿಕ ವಿದ್ಯುತ್ ಕಂಬಗಳು ನೆಲಕ್ಕುರುಳಿ ಬಿದಿದ್ದು, ಅಡಿಕೆ , ಬಾಳೆ, ತೆಂಗು ಸೇರಿದಂತೆ ತೋಟಗಾರಿಕಾ ಬೆಳೆಗಳಿಗೆ ಹಾನಿ ಸಂಭವಿಸಿದೆ. ಬಿರುಗಾಳಿ ಮತ್ತು ಆಲಿಕಲ್ಲಿನ ರಭಸಕ್ಕೆ ೧೦ ಕ್ಕೂ ಹೆಚ್ಚು ಮನೆಗಳ ಮೇಲ್ಛಾವಣಿಗೆ ಹಾನಿ ಸಂಭವಿಸಿದೆ. ಕಂದಾಯ ಮತ್ತು ಕೃಷಿ ಹಾಗೂ ತೋಟಗಾರಿಕಾ ಇಲಾಖೆ ಅಧಿಕಾರಿಗಳು ಹಾನಿ ಪ್ರದೇಶಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮತ್ತೊಂದೆಡೆ ಯಾದಗಿರಿ ಜಿಲ್ಲೆಯ ವಿವಿಧೆಡೆ ಸುರಿದ ಗುಡುಗು, ಸಿಡಿಲು, ಗಾಳಿ ಸಹಿತ ಆಲಿಕಲ್ಲು ಮಳೆಗೆ ಸಾಕಷ್ಟು ಹಾನಿ ಉಂಟಾಗಿದೆ. ಭಾರೀ ಗಾಳಿ ಮಳೆಯಿಂದ ವಿದ್ಯುತ್ ವ್ಯವಸ್ಥೆಗೆ ತೀವ್ರ ಹಾನಿಯಾಗಿದ್ದು, ಯಾದಗಿರಿ, ಗುರುಮಠಕಲ್ ಮತ್ತು ವಡಗೇರಾ ಉಪವಿಭಾಗಗಳಲ್ಲಿ ಒಟ್ಟು ೩೬ ವಿದ್ಯುತ್ ಕಂಬಗಳು ಉರುಳಿ ಬಿದ್ದಿವೆ. ಇದೇ ವೇಳೆ ಸುರಪುರ ವಿಭಾಗದ ಸುರಪುರ, ಶಹಾಪುರ ಹಾಗೂ ಹುಣಸಗಿ ಭಾಗಗಳಲ್ಲಿ ೯ ಕಂಬಗಳು ಹಾನಿಗೊಳಗಾಗಿವೆ. ಮರಗಳು ವಿದ್ಯುತ್ ತಂತಿಗಳ ಮೇಲೆ ಬಿದ್ದ ಪರಿಣಾಮ ನಗರ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಬುಧವಾರ ರಾತ್ರಿ ವಿದ್ಯುತ್ ವ್ಯತ್ಯಯ ಉಂಟಾಯಿತು. ತಕ್ಷಣ ಕಾರ್ಯಾಚರಣೆ ಕೈಗೊಂಡ ಜೆಸ್ಕಾಂ ಸಿಬ್ಬಂದಿ ಪ್ರಮುಖ ಪ್ರದೇಶಗಳಲ್ಲಿ ವಿದ್ಯುತ್ ಪೂರೈಕೆಯನ್ನು ಮರುಸ್ಥಾಪಿಸಿದ್ದಾರೆ. ಮಳೆಯಿಂದ ಕೃಷಿ ಕ್ಷೇತ್ರಕ್ಕೂ ಭಾರೀ ಹೊಡೆತ ಬಿದ್ದಿದ್ದು, ಚಿನ್ನೂರ, ಗೊಂದೇನೂರ ಸೇರಿದಂತೆ ಹಲವಾರು ಗ್ರಾಮಗಳಲ್ಲಿ ನೂರಕ್ಕೂ ಹೆಚ್ಚು ಎಕರೆ ಪ್ರದೇಶದಲ್ಲಿ ಬೆಳೆ

ಹಾನಿಯಾಗಿದೆ. ಭತ್ತ, ಸಜ್ಜೆ ಹಾಗೂ ಜೋಳದ ಬೆಳೆಗಳು ನೆಲಕಚ್ಚಿದ್ದು, ಸುಮಾರು ೭೫ ರೈತರು ನಷ್ಟ ಅನುಭವಿಸಿದ್ದಾರೆ. ಘಟನಾ ಸ್ಥಳಗಳಿಗೆ ಭೇಟಿ ನೀಡಿದ ಕೃಷಿ ಇಲಾಖೆಯ ಅಧಿಕಾರಿಗಳು ಹಾನಿ ಕುರಿತು ಪರಿಶೀಲನೆ ನಡೆಸಿದ್ದಾರೆ.

********

ಮಂಗಳೂರು ಹೊರವಲಯದ ಪಿಲಿಕುಳ ಜೈವಿಕ ಉದ್ಯಾನವನಕ್ಕೆ ಹೊಸ ಅತಿಥಿಗಳ ಆಗಮನವಾಗಿದೆ. ಗೀತಾ ಹೆಸರಿನ ಭಾರತೀಯ ತೋಳ ನಾಲ್ಕು ಗಂಡು ಮತ್ತು ಮೂರು ಹೆಣ್ಣು ಸೇರಿದಂತೆ ಒಟ್ಟು ಏಳು ಮರಿಗಳಿಗೆ ಜನ್ಮ ನೀಡಿದೆ. ೩ ವರ್ಷಗಳಿಂದ ಪಿಲಿಕುಳ ಜೈವಿಕ ಉದ್ಯಾನವನದಲ್ಲಿ ಭಾರತೀಯ ತೋಳಗಳನ್ನು ಇರಿಸಲಾಗಿದ್ದು, ಭಾರತೀಯ ತೋಳಗಳ ಮೊದಲ ಯಶಸ್ವಿ ಸಂತಾನೋತ್ಪತ್ತಿ ಇದಾಗಿದೆ. ಅಲ್ಲದೆ ಉದ್ಯಾನವನದ ಸಂರಕ್ಷಣೆ ಮತ್ತು ಸೆರೆಹಿಡಿಯಲಾದ ಸಂತಾನೋತ್ಪತ್ತಿ ಪ್ರಯತ್ನಗಳಲ್ಲಿ ಇದು ಒಂದು ಪ್ರಮುಖ ಮೈಲಿಗಲ್ಲಾಗಿದೆ ಎಂದು ಪಿಲಿಕುಳ ಜೈವಿಕ ಉದ್ಯಾನವನದ ಅಧಿಕಾರಿಗಳು ತಿಳಿಸಿದ್ದಾರೆ. ತಾಯಿ ತೋಳ ಮತ್ತು ಎಲ್ಲಾ ಏಳು ಮರಿಗಳು ಆರೋಗ್ಯವಾಗಿವೆ ಮತ್ತು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿವೆ ಮತ್ತು ಪಶುವೈದ್ಯರು ಮತ್ತು ಪ್ರಾಣಿ ಪಾಲಕರು ಅವುಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ತಿಳಿಸಿದ್ದಾರೆ.

********

ಸದ್ಯ ಬೆಂಗಳೂರಿನಲ್ಲಿರುವ ರಾಜೀವ್ ಗಾಂಧಿ ಆರೋಗ್ಯ ವಿಶ್ವ ವಿದ್ಯಾಲಯವನ್ನು ಈ ವರ್ಷ ರಾಮನಗರದಲ್ಲಿನ ೨೧೮ ಎಕರೆಯ ಕ್ಯಾಂಪಸ್‌ಗೆ ಸ್ಥಳಾಂತರಿಸಲಾಗುವುದು ಎಂದು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಬಿ.ಸಿ. ಭಗವಾನ್ ಹೇಳಿದ್ದಾರೆ. ಬಳ್ಳಾರಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ೨೫ ಸರ್ಕಾರಿ ಮೆಡಿಕಲ್ ಕಾಲೇಜುಗಳಲ್ಲಿ ಬೋಧನಾ ಸಿಬ್ಬಂದಿ ಸಮಸ್ಯೆ ಇದ್ದು, ಈ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗಿದೆ ಎಂದು ತಿಳಿಸಿದರು. ದೇಶದಲ್ಲಿ ಮಾದಕವಸ್ತುಗಳ ಬಳಕೆ ಹೆಚ್ಚುತ್ತಿರುವುದರಿಂದ ನಶ ಮುಕ್ತ ಭಾರತ ಅಭಿಯಾನದ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಈಗಾಗಲೇ ೧೮ ಜಿಲ್ಲೆಗಳಲ್ಲಿ ಈ ಅಭಿಯಾನ ಯಶಸ್ವಿಯಾಗಿ ನಡೆದಿದೆ. ರಾಜ್ಯದ ಪ್ರತಿ ಕಾಲೇಜಿನಲ್ಲಿ ಕಾರ್ಯತಂಡ ರಚಿಸಿ, ಕ್ರಮ ವಹಿಸಲಾಗಿದೆ ಎಂದು ಹೇಳಿದರು. ಅಂಗಾಂಗದಾನದ ಬಗ್ಗೆ ಸಹ ಅರಿವು ಮೂಡಿಸಲಾಗುತ್ತಿದ್ದು, ರಾಜ್ಯದಲ್ಲಿ ೫ಲ ಸಾವಿರ ಜನ ಅಂಗಾಂಗದಾನಕ್ಕೆ ನೋಂದಣಿ ಮಾಡಿದ್ದಾರೆ ಎಂದು ಅವರು ಮಾಹಿತಿ ನೀಡಿದ್ದಾರೆ.

****END****